## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀಮತಿ ಕೆ. ರುಕ್ಮಿಣಿ ಕೋಂ ಬಿ.ಎಸ್. ಶ್ರೀಧರ್, ಕಾರ್ಯದರ್ಶಿ ಹಾಗೂ ಪ್ರಭಾರ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉರಿಗಿಲಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ ಕುರಿತು – ಅಂತಿಮ ಆದೇಶ.

ಓದಲಾಗಿದೆ:– ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/525/ಗ್ರಾಪಂಕಾ/2014, ದಿನಾಂಕ: 19-01-2015.

ಅಪರ ನಿಬಂಧಕರು, ವಿಚಾರಣೆಗಳು-14, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-2/DE/37/2015/ARE-14, ದಿನಾಂಕ 27.12.2018.

ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok-2/DE/37/2015/ARE-14, ದಿನಾಂಕ: 31.12.2018.

ಪ್ರಸ್ತಾವನೆ :–

ಮೇಲೆ ಓದಲಾದ ಕ್ರಮಾಂಕ (1)ರ ಸರ್ಕಾರದ ಆದೇಶದಲ್ಲಿ ಶ್ರೀಮತಿ ಕೆ. ರುಕ್ಮಿಣಿ ಕೋಂ ಬಿ.ಎಸ್. ಶ್ರೀಧರ್, ಕಾರ್ಯದರ್ಶಿ ಹಾಗೂ ಪ್ರಭಾರ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉರಿಗಿಲಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಿ ಆದೇಶಿಸಲಾಗಿತ್ತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು-14, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ. ಮೇಲೆ ಓದಲಾದ ಕ್ರಮಾಂಕ (2) ರ ವಿಚಾರಣಾ ವರದಿಯಲ್ಲಿ ಆಪಾದಿತ ನೌಕರರಾದ ಶ್ರೀಮತಿ ಕೆ. ರುಕ್ಮಿಣಿ ಕೋಂ ಬಿ.ಎಸ್. ಶ್ರೀಧರ್, ಕಾರ್ಯದರ್ಶಿ ಹಾಗೂ ಪ್ರಭಾರ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉರಿಗಿಲಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ರವರು ದಿನಾಂಕ: 22-10-2018 ರಂದು ಮೃತಪಟ್ಟಿರುವುದರಿಂದ ವಿಚಾರಣೆಯನ್ನು ಕೈಬಿಟ್ಟಿರುವುದಾಗಿ ಅಪರ ನಿಬಂಧಕರು, ವಿಚಾರಣೆಗಳು-14 ರವರು ಮಾನ್ಯ ಉಪ ಲೋಕಾಯುಕ್ತರಿಗೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಿರುತ್ತಾರೆ. ಮಾನ್ಯ ಉಪ ಲೋಕಾಯುಕ್ತರು, ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪಿತ ಸರ್ಕಾರಿ ನೌಕರರು ದಿನಾಂಕ:22-10-2018 ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ಇಲಾಖಾ ವಿಚಾರಣೆಯನ್ನು ಕೈಬಿಡಲಾಗಿದೆ ಎಂದು ತಿಳಿಸಿರುವುದರಿಂದ ಸರ್ಕಾರವು ಆಪಾದಿತ ನೌಕರರ ವಿರುದ್ಧದ ವಿಚಾರಣೆಯನ್ನು ಕೈಬಿಡಲು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/44/ಗ್ರಾಪಂಕಾ/2019, ಬೆಂಗಳೂರು, ದಿನಾಂಕ: 21-03-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನ ಅನ್ವಯ ಶ್ರೀಮತಿ ಕೆ. ರುಕ್ಮಿಣಿ ಕೋಂ ಬಿ.ಎಸ್. ಶ್ರೀಧರ್, ಕಾರ್ಯದರ್ಶಿ ಹಾಗೂ ಪ್ರಭಾರ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉರಿಗಿಲಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ರವರು ದಿನಾಂಕ: 22-10-2018 ರಂದು ಮೃತಪಟ್ಟಿರುವುದರಿಂದ ಸದರಿಯವರ ವಿರುದ್ಧದ ವಿಚಾರಣೆಯನ್ನು ಕೈಬಿಡಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್) 21/3
ಉಪ ನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.

2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಅಪರ ನಿಬಂಧಕರು, ವಿಚಾರಣೆಗಳು-14, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ ಜಿಲ್ಲೆ.
6) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಕೋಲಾರ, ಕೋಲಾರ ಜಿಲ್ಲೆ. (ಶ್ರೀಮತಿ ಕೆ. ರುಕ್ಮಿಣಿ ಕೋಂ ಬಿ.ಎಸ್. ಶ್ರೀಧರ್, ಕಾರ್ಯದರ್ಶಿ ಹಾಗೂ ಪ್ರಭಾರ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಉರಿಗಿಲಿ ಗ್ರಾಮ ಪಂಚಾಯಿತಿ, ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ ರವರ ಕುಟುಂಬದವರಿಗೆ ಜಾರಿ ಮಾಡಿ ವರದಿ ನೀಡಲು ತಿಳಿಸಲಾಗಿದೆ)
7) ಗಣಕ ಕೋಶ.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.